# ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ

ರಾಜ್ಯ ಕೇಂದ್ರ ಕಾರ್ಯಾಲಯ, #39, ಶಾಂತಿಗೃಹ, ಅರಮನೆ ರಸ್ತೆ, ಬೆಂಗಳೂರು – 560 001

ದೂ:+91-80-2226 0017;+91-80-2226 7470;+91-80-2226 1047 ಮಿಂಚಂಚೆ: info@bsgkarnataka.org ಅಂತರ್ಜಾಲ: www.bsgkarnataka.in

**ಸಂಖ್ಯೆ:**SHQ/ORG-1/Rajy S-G-Ro-Ra T.C/133/2025-26/1540 **ದಿನಾಂಕ:12.11.2025**

ಜಿಲ್ಲಾ ಕಾರ್ಯದರ್ಶಿಗಳಿಗೆ
ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ
**ವಿಜಯನಗರ/ಬಳ್ಳಾರಿ/ಕೊಪ್ಪಳ** ಜಿಲ್ಲೆ

ಮಾನ್ಯರೆ,

ವಿಷಯ:- 2024-25ನೇ ಸಾಲಿನಲ್ಲಿ ರಾಜ್ಯ ಮಟ್ಟದ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸಿರುವ ಅರ್ಹ ಸ್ಕೌಟ್ಸ್-ಗೈಡ್ಸ್‌ಗಳನ್ನು ರಾಜ್ಯ ಪುರಸ್ಕಾರ ಪರೀಕ್ಷಾ ಶಿಬಿರಕ್ಕೆ ನಿಯೋಜಿಸುವ ಬಗ್ಗೆ

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ರಾಜ್ಯ ಸಂಸ್ಥೆ ಮತ್ತು ವಿಜಯನಗರ ಜಿಲ್ಲಾ ಸಂಸ್ಥೆಯ ಸಹಯೋಗದೊಂದಿಗೆ 2024-25ನೇ ಸಾಲಿನಲ್ಲಿ ರಾಜ್ಯ ಮಟ್ಟದ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸಿರುವ ಅರ್ಹ ಸ್ಕೌಟ್ಸ್, ಗೈಡ್ಸ್‌ಗಳಿಗೆ ರಾಜ್ಯಪುರಸ್ಕಾರ ಪರೀಕ್ಷಾ ಶಿಬಿರವನ್ನು ಏರ್ಪಡಿಸಲಾಗಿದೆ. ವಿವರಗಳು ಈ ಕೆಳಕಂಡಂತಿದೆ.

| | |
|---|---|
| ಶಿಬಿರ | ಸ್ಕೌಟ್ಸ್, ಗೈಡ್ಸ್‌ಗಳಿಗೆ ರಾಜ್ಯಪುರಸ್ಕಾರ ಪರೀಕ್ಷಾ ಶಿಬಿರ |
| ಸ್ಥಳ | ಸುರಭಿ ವಿದ್ಯಾನಿಕೇತನ ಶಾಲೆ, ಹೊಸೂರಮ್ಮ ದೇವಸ್ಥಾನ ಹತ್ತಿರ, ಹೊಸೂರು, ಹೊಸಪೇಟೆ ತಾಲ್ಲೂಕು, ವಿಜಯನಗರ ಜಿಲ್ಲೆ |
| ದಿನಾಂಕ | 28.11.2025 ರಿಂದ 30.11.2025ರ ವರೆಗೆ (3 ದಿನಗಳು) |
| ವರದಿ ಮಾಡುವ ದಿನಾಂಕ | 28.11.2025 ರಂದು ಸಂಜೆ 04.00 ಗಂಟೆಗೆ (ತಡವಾಗಿ ಬಂದವರನ್ನು ಸೇರಿಸಲಾಗುವುದಿಲ್ಲ) |
| ಬಿಡುಗಡೆ ದಿನಾಂಕ | 30.11.2025ರಂದು ಸಂಜೆ 5.00 ಗಂಟೆಗೆ |
| ಊಟ ಹಾಗೂ ವಸತಿ | ರಾಜ್ಯ & ಜಿಲ್ಲಾ ಸಂಸ್ಥೆ ವ್ಯವಸ್ಥೆ ಮಾಡಲಾಗಿದೆ. |
| ನೊಂದಣಿ ಶುಲ್ಕ | ಪ್ರತಿಯೊಬ್ಬರಿಗೆ ರೂ.250/- |
| ಯಾರು ಭಾಗವಹಿಸುವುದು | ರಾಜ್ಯ ಸಂಸ್ಥೆಯಿಂದ ಆನ್‌ಲೈನ್ ಲಿಖಿತ ಪರೀಕ್ಷೆಯಲ್ಲಿ ಭಾಗವಹಿಸಿರುವ ಹಾಗೂ ರಾಜ್ಯಪುರಸ್ಕಾರ ಪೂರ್ವ ಸಿದ್ಧತಾ ಪರೀಕ್ಷಾ ಶಿಬಿರದಲ್ಲಿ ಭಾಗವಹಿಸಿರುವ ಅರ್ಹ ಸ್ಕೌಟ್ಸ್ & ಗೈಡ್ಸ್‌ಗಳಿಗೆ ಮಾತ್ರ ಅವಕಾಶವಿರುವುದು. ಸ್ಕೌಟ್ಸ್-ಗೈಡ್ಸ್‌ಗಳ ಪಟ್ಟಿಯನ್ನು ರಾಜ್ಯ ಸಂಸ್ಥೆಯಿಂದ ಕಳುಹಿಸಲಾಗುವುದು. |
| ಭಾಗವಹಿಸುವ ಜಿಲ್ಲೆಗಳು | **ವಿಜಯನಗರ, ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲೆಗಳ ಸ್ಕೌಟ್ಸ್ ಮತ್ತು ಗೈಡ್ಸ್‌ಗಳು ಮಾತ್ರ** |
| ಗಮನಿಸಿ | * ಸಮವಸ್ತ್ರ ಪೂರ್ಣವಾಗಿರಬೇಕು. ಪ್ರಾವೀಣ್ಯತಾ ಪದಕ ಧರಿಸಿರಬೇಕು. (ಗೈಡ್ಸ್‌ಗಳಿಗೆ ಸ್ಯಾಷ್ ಕಡ್ಡಾಯ) ಲಾಗ್ ಬುಕ್ ಸಂಪೂರ್ಣಗೊಂಡಿರಬೇಕು ಮತ್ತು ಪದಕ ಪರೀಕ್ಷಕರಿಂದ ಸಹಿ & ಪ್ರಮಾಣ ಪತ್ರ ಪಡೆದಿರಬೇಕು.<br>* ಪರೀಕ್ಷಾ ಶಿಬಿರದಲ್ಲಿ ಭಾಗವಹಿಸುವ ಸ್ಕೌಟ್ಸ್/ಗೈಡ್ಸ್‌ಗಳೊಂದಿಗೆ ಸ್ಕೌಟರ್/ಗೈಡರ್‌ಗಳು ಕಡ್ಡಾಯವಾಗಿ ಭಾಗವಹಿಸಬೇಕು.<br>* ಒಂದು ಘಟಕದಿಂದ 16ಕ್ಕಿಂತಲೂ ಹೆಚ್ಚು ಸ್ಕೌಟ್ಸ್/ಗೈಡ್ಸ್‌ಗಳನ್ನು ಪರೀಕ್ಷಾ ಶಿಬಿರಕ್ಕೆ ಅನುಮತಿಸಲಾಗುವುದಿಲ್ಲ. |

| | |
|---|---|
| ತರಬೇಕಾದ ವಸ್ತುಗಳು | ಸಮವಸ್ತ್ರ, ಬದಲಿ ಉಡುಪು, ಹಗುರ ಹಾಸಿಗೆ, ಹೊದಿಕೆ, ತಟ್ಟೆ ಲೋಟ, ಸಂಪೂರ್ಣಗೊಂಡ ಲಾಗ್ ಬುಕ್, ಹಗ್ಗ, ಸ್ಟೇವ್ಸ್, ಕಲರ್ ಪೆನ್ಸಿಲ್ಸ್, ಸ್ಕೆಚ್‌ಪೆನ್ಸ್ ಹಾಗೂ ಪರೀಕ್ಷೆಗೆ ಅವಶ್ಯವಿರುವ ಇತರೆ ವಸ್ತುಗಳು. <u>ಪ್ರಾವೀಣ್ಯತಾ ಪ್ರಮಾಣ ಪತ್ರಗಳು ಮತ್ತು ಪದಕ ಇತ್ಯಾದಿ ಸಾಮಗ್ರಿಗಳನ್ನು ಕಡ್ಡಾಯವಾಗಿ ತರಬೇಕು</u>. |

ಸಹಾಯಕ ರಾಜ್ಯ ಸಂಘಟನಾ ಆಯುಕ್ತರು/ಜಿಲ್ಲಾ ಸಂಘಟಕರುಗಳು/ಸ್ಕೌಟ್-ಗೈಡ್ ಸ್ವಯಂ ಸೇವಕರು/ಸ್ಕೌಟ್-ಗೈಡ್ ಸಹಾಯಕರುಗಳು ಸ್ಕೌಟ್ಸ್-ಗೈಡ್ಸ್‌ಗಳನ್ನು ಪರೀಕ್ಷಾ ಶಿಬಿರಕ್ಕೆ ನಿಯೋಜಿಸುವ ಮುನ್ನ ಮೇಲ್ಕಂಡ ನಿಭಂದನೆಗಳನ್ನು ಪರಿಶೀಲಿಸಿ, ಅರ್ಹರಿರುವ ಸ್ಕೌಟ್ಸ್/ಗೈಡ್ಸ್‌ಗಳನ್ನು ಮಾತ್ರ ರಾಜ್ಯ ಪುರಸ್ಕಾರ ಪರೀಕ್ಷಾ ಶಿಬಿರಕ್ಕೆ ನಿಯೋಜಿಸಲು ಕೋರಲಾಗಿದೆ. ತಮ್ಮ ಜಿಲ್ಲೆಯಿಂದ ಭಾಗವಹಿಸುವ ಸ್ಕೌಟ್ಸ್ ಮತ್ತು ಗೈಡ್ಸ್‌ಗಳು ಭಾಗವಹಿಸುವ ಬಗ್ಗೆ ರಾಜ್ಯ ಸಂಸ್ಥೆಗೆ ದಿನಾಂಕ:25.11.2025ರ ರೊಳಗೆ ತಿಳಿಸುವುದು. ಕೂಡಲೆ ಕ್ರಮ ವಹಿಸಲು ತಿಳಿಸಲಾಗಿದೆ.

ಸ್ಕೌಟ್ಸ್-ಗೈಡ್ಸ್ ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

(ಕೆ. ಗಂಗಪ್ಪಗೌಡ)
ರಾಜ್ಯ ಕಾರ್ಯದರ್ಶಿ

<u>**ಪ್ರತಿಯನ್ನು ಮಾಹಿತಿಗಾಗಿ:**</u>

1. ಜಿಲ್ಲಾ ಮುಖ್ಯ ಆಯುಕ್ತರು, ಭಾ.ಸ್ಕೌ&ಗೈ
2. ಜಿಲ್ಲಾ ಆಯುಕ್ತರು (ಸ್ಕೌ/ಗೈ), ಭಾ.ಸ್ಕೌ&ಗೈ
3. ರಾಜ್ಯದ ಎಲ್ಲಾ ಸಹಾಯಕ ರಾಜ್ಯ ಸಂಘಟನಾ/ಜಿಲ್ಲಾ ಸಂಘಟಿಕರು/ಸ್ಕೌಟ್-ಗೈಡ್ ಸ್ವಯಂ ಸೇವಕರು/ಸ್ಕೌಟ್-ಗೈಡ್ ಸಹಾಯಕರುಗಳಿಗೆ
4. ಶಿಬಿರದ ನಾಯಕರು/ಸಹನಾಯಕರು/ಪರೀಕ್ಷಕರುಗಳಿಗೆ
5. ಸಂಬಂಧಪಟ್ಟ ತರಬೇತಿ ಶಿಬಿರ ಕೇಂದ್ರಕ್ಕೆ
6. ಲೆಕ್ಕ ವಿಭಾಗ
7. ಕಛೇರಿ ಪ್ರತಿ